# ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

5ನೇ ಮಹಡಿ, ವಿಶ್ವೇಶ್ವರಯ್ಯ ದೊಡ್ಡ ಗೋಪುರ, ಡಾ.ಬಿ.ಆರ್. ಅಂಬೇಡ್ಕರ್ ರಸ್ತೆ, ಬೆಂಗಳೂರು 560001.

ದೂರವಾಣಿ ಸಂಖ್ಯೆ: 080-29904350, 29904268 ಇಮೇಲ್ : mdkvcdc@gmail.com

---

ಸಂಖ್ಯೆ: ಕಒಸಅನಿನಿ/ಕ್ರಿ.ಯೋ./ಸಿಆರ್.-505/2024-25 ದಿನಾಂಕ:01.08.2024

**ಪತ್ರಿಕಾ ಪ್ರಕಟಣೆ**

**2024-25ನೇ ಸಾಲಿಗೆ ಸಾಲ ಸೌಲಭ್ಯ ಒದಗಿಸಲು ಆನ್ ಲೈನ್ ಮೂಲಕ ಅರ್ಜಿಗಳ ಆಹ್ವಾನ ಕುರಿತು:**

ಹಿಂದುಳಿದ ವರ್ಗಗಳ ಪ್ರವರ್ಗ-3ಎ ನಲ್ಲಿ ಬರುವ ಒಕ್ಕಲಿಗ ಸಮುದಾಯಗಳಿಗೆ ಸೇರಿದ ಕ್ರಮ ಸಂಖ್ಯೆ 1 ರ (ಎ) ಯಿಂದ (ಟಿ) ವರೆಗೆ ನಮೂದಾಗಿರುವ ಒಕ್ಕಲಿಗ, ವಕ್ಕಲಿಗ, ಸರ್ಪ ಒಕ್ಕಲಿಗ, ಹಳ್ಳಿಕಾರ್ ಒಕ್ಕಲಿಗ, ನಾಮಧಾರಿ ಒಕ್ಕಲಿಗ, ಗಂಗಡ್‌ಕಾರ್ ಒಕ್ಕಲಿಗ, ದಾಸ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ, ಗೌಡ (Gowda) / ಗೌಡ (Gouda), ಹಳ್ಳಿಕಾರ್, ಕುಂಚಿಟಿಗ, ಗೌಡ, ಕಾಪು, ಹೆಗ್ಗಡೆ, ಕಮ್ಮ, ರಡ್ಡಿ, ಗೌಂಡರ್, ನಾಮಧಾರಿಗೌಡ, ಉಪ್ಪಿನ ಕೊಳಗ / ಉತ್ತಮ ಕೊಳಗ ಸಮುದಾಯಕ್ಕೆ ಸೇರಿದ ಜನರ ಅಭಿವೃದ್ಧಿಗಾಗಿ 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಬಯಸುವವರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಯೋಜನೆಗಳು ಮತ್ತು ಸೌಲಭ್ಯಗಳು:**

I. **ಸ್ವಯಂ ಉದ್ಯೋಗ ನೇರ ಸಾಲ ಯೋಜನೆ:**

ಸ್ವಯಂ ಉದ್ಯೋಗ ಕೈಗೊಳ್ಳಲು ಒಕ್ಕಲಿಗ ಸಮುದಾಯಕ್ಕೆ ಸೇರಿದ್ದು, ಅವರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಿಗೆ ರೂ.98,000/- ಗಳ ಹಾಗೂ ನಗರ ಪ್ರದೇಶದವರಿಗೆ ರೂ.1,20,000/- ಗಳ ಮಿತಿಯಲ್ಲಿರಬೇಕು ಹಾಗೂ ಅರ್ಜಿದಾರರ ವಯಸ್ಸು 18-55 ವರ್ಷದೊಳಗಿರಬೇಕು. ಆರ್ಥಿಕ ಚಟುವಟಿಕೆಗಳಿಗನುಸಾರ ಈ ಕೆಳಕಂಡಂತೆ ಸಾಲ ಮತ್ತು ಸಹಾಯಧನ ಸೌಲಭ್ಯವನ್ನು ನಿಗಮದಿಂದ ಒದಗಿಸಲಾಗುವುದು.

ಘಟಕ ವೆಚ್ಚ ರೂ.2,00,000/- ಗಳಿಗೆ ಶೇ.30 ರಷ್ಟು ಗರಿಷ್ಠ ರೂ.30,000/-ಗಳ ಸಹಾಯಧನ ಉಳಿಕೆ ಶೇ.70ರಷ್ಟು ರೂ.1,70,000/-ಗಳನ್ನು ವಾರ್ಷಿಕ ಶೇ.4 ರ ಬಡ್ಡಿ ದರದಲ್ಲಿ ಸಾಲ.

ರೂ.1.00 ಲಕ್ಷಕ್ಕಿಂತ ಹೆಚ್ಚಿನ ಸಾಲದ ಭದ್ರತೆಗೆ ಸಾಲದ ಮೊತ್ತದಷ್ಟು ಮೌಲ್ಯವಿರುವ ಅರ್ಜಿದಾರರು / ಜಾಮೀನುದಾರರ ಸ್ಥಿರಾಸ್ತಿಯನ್ನು ನಿಗಮದ ಹೆಸರಿಗೆ ಆಧಾರ ಮಾಡಬೇಕು.

II. **ಗಂಗಾ ಕಲ್ಯಾಣ ನೀರಾವರಿ ಯೋಜನೆ: Visit to"KarnatakaHelp.in"**

ಒಕ್ಕಲಿಗ ಸಮುದಾಯಕ್ಕೆ ಸೇರಿದ್ದು, ವಾರ್ಷಿಕ ಆದಾಯ ರೂ.98,000/- ಗಳ ಮಿತಿಯೊಳಗಿರುವ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗುವುದು.

ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ರಾಮನಗರ ಜಿಲ್ಲೆಗಳಿಗೆ ವೈಯಕ್ತಿಕ ಕೊಳವೆ ಬಾವಿ ಯೋಜನೆ ಘಟಕ ವೆಚ್ಚ ರೂ.4.75 ಲಕ್ಷಗಳಲ್ಲಿ ರೂ.4.25 ಲಕ್ಷಗಳ ಸಹಾಯಧನ ಇದರಲ್ಲಿ ರೂ.75,000/-ಗಳನ್ನು ವಿದ್ಯುದ್ದೀಕರಣಕ್ಕೆ ಎಸ್ಕಾಂಗಳಿಗೆ ಪಾವತಿ

ಮಾಡಲಾಗುವುದು. ಘಟಕ ಪೂರ್ಣಗೊಳಿಸಲು ಸಾಧ್ಯವಾಗದಿದ್ದಲ್ಲಿ ರೂ.50,000/- ಗಳ ಸಾಲವನ್ನು ಶೇ.4 ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು.

ಉಳಿಕೆ ಜಿಲ್ಲೆಗಳಿಗೆ ಘಟಕ ವೆಚ್ಚ ರೂ.3.75 ಲಕ್ಷ ಇದರಲ್ಲಿ ಸಹಾಯಧನ ರೂ.3.25 ಲಕ್ಷ ಸಾಲ ರೂ.50,000/- ಗಳ ಸಾಲವನ್ನು ಶೇ.4 ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. ಸಹಾಯಧನದನ ಮೊತ್ತದಲ್ಲಿ ಪ್ರತಿ ಕೊಳವೆ ಬಾವಿಗೆ ರೂ.75,000/-ಗಳನ್ನು ವಿದ್ಯುದ್ದೀಕರಣಕ್ಕೆ ಎಸ್ಕಾಂಗಳಿಗೆ ಪಾವತಿ ಮಾಡಲಾಗುವುದು.

ಈ ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 01 ಎಕರೆ ಜಮೀನು ಹೊಂದಿರಬೇಕು. ಇತರೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಕನಿಷ್ಠ 02 ಎಕರೆ ಜಮೀನು ಇರಬೇಕು.

**ತೆರೆದ ಬಾವಿ:** ಕರಾವಳಿ ಹಾಗೂ ಮಲೆನಾಡು ಪ್ರದೇಶದ ಜಿಲ್ಲೆಗಳಲ್ಲಿ ವೈಯಕ್ತಿಕ ನೀರಾವರಿ ಕೊಳವೆ ಬಾವಿ ಯೋಜನೆಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ತೆರೆದ ಬಾವಿ ನೀರಾವರಿ ಸೌಲಭ್ಯ ಒದಗಿಸಲು ಅವಕಾಶವಿರುತ್ತದೆ.

III. **ಸ್ವಾವಲಂಬಿ ಸಾರಥಿ ಯೋಜನೆ:**

ಒಕ್ಕಲಿಗ ಸಮುದಾಯಕ್ಕೆ ಸೇರಿದ್ದು, ಅವರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಿಗೆ ರೂ.98,000/- ಗಳ ಹಾಗೂ ನಗರ ಪ್ರದೇಶದವರಿಗೆ ರೂ.1,20,000/- ಗಳ ಮಿತಿಯಲ್ಲಿರಬೇಕು ಹಾಗೂ ಅರ್ಜಿದಾರರ ವಯಸ್ಸು 18-45 ವರ್ಷದೊಳಗಿರುವ ಯುವಜನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಾವಲಂಬಿ ಸಾರಥಿ ಯೋಜನೆಯಡಿ ನಾಲ್ಕು ಚಕ್ರ ವಾಹನ ಖರೀದಿಗೆ ಪಡೆಯುವ ಸಾಲಕ್ಕೆ ಶೇ.50 ರಷ್ಟು ಗರಿಷ್ಠ 3.00 ಲಕ್ಷಗಳ ಸಹಾಯಧನವನ್ನು ನಿಗಮದಿಂದ ಮಂಜೂರು ಮಾಡಲಾಗುವುದು. ಉಳಿಕೆ ಮೊತ್ತವನ್ನು ಬ್ಯಾಂಕ್‌ಗಳ ಮೂಲಕ ಅವರು ವಿಧಿಸುವ ಚಾಲ್ತಿ ಬಡ್ಡಿದರದಲ್ಲಿ ಸಾಲ ಪಡೆಯುವುದು.

IV. **ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ):**

ಸ್ವಯಂ ಉದ್ಯೋಗ ಮಾಡಲು ಒಕ್ಕಲಿಗ ಸಮುದಾಯಕ್ಕೆ ಸೇರಿದ್ದು, ಅವರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದವರಿಗೆ ರೂ.98,000/- ಗಳ ಹಾಗೂ ನಗರ ಪ್ರದೇಶದವರಿಗೆ ರೂ.1,20,000/- ಗಳ ಮಿತಿಯಲ್ಲಿರಬೇಕು ಹಾಗೂ ಅರ್ಜಿದಾರರ ವಯಸ್ಸು 18-55 ವರ್ಷದೊಳಗಿದ್ದು, ಅವರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳು / ಉದ್ಯಮಗಳಿಗೆ ವಾಣಿಜ್ಯ ಬ್ಯಾಂಕ್‌ಗಳ ಮೂಲಕ ಸಾಲ ಪಡೆದಲ್ಲಿ ನಿಗಮದಿಂದ ಶೇ.20 ರಷ್ಟು ಗರಿಷ್ಠ ರೂ.1.00 ಲಕ್ಷಗಳ ಸಹಾಯಧನ ಮಂಜೂರು ಮಾಡಲಾಗುವುದು.

V. **ಶೈಕ್ಷಣಿಕ ಸಾಲ ಯೋಜನೆ:**

- **ಶೈಕ್ಷಣಿಕ ಸಾಲ ಯೋಜನೆ (Fresh Students):** ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳು ಸಿಇಟಿ / ನೀಟ್ ಮೂಲಕ ಪ್ರವೇಶ ಪಡೆದು ವೃತ್ತಿಪರ ಕೋರ್ಸುಗಳಾದ ಇಂಜಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಮುಂತಾದ 28 ಕೋರ್ಸುಗಳಲ್ಲಿನ ವ್ಯಾಸಂಗಕ್ಕಾಗಿ ವಾರ್ಷಿಕ ರೂ.1.00 ಲಕ್ಷಗಳಂತೆ ಕೋರ್ಸ್‌ನ ಅವಧಿಗೆ ಗರಿಷ್ಠ 4.00 ಲಕ್ಷಗಳಿಂದ ರೂ. 5.00 ಲಕ್ಷಗಳಿಗೆ ವಾರ್ಷಿಕ ಶೇ.2ರ ಬಡ್ಡಿ ದರದಲ್ಲಿ ಸಾಲ ಮಂಜೂರು ಮಾಡಲಾಗುವುದು.
- **ಶೈಕ್ಷಣಿಕ ಸಾಲ ಯೋಜನೆ (Renewals):** 2022-23ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 2024-25 ನೇ ಸಾಲಿಗೆ 3ನೇ ಕಂತಿನ ನವೀಕರಣ ಸಾಲ ಮಂಜೂರು ಮಾಡಲು 3ನೇ ವರ್ಷದ ವ್ಯಾಸಂಗ ದೃಢೀಕರಣ ಮತ್ತು ಎರಡನೇ ವರ್ಷದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು. 2023-24 ನೇ ಸಾಲಿನಲ್ಲಿ ಸಾಲ ಪಡೆದು 2024-25ನೇ ಸಾಲಿನ 2ನೇ ಕಂತಿನ ಸಾಲಕ್ಕೆ 2ನೇ ವರ್ಷದ ವ್ಯಾಸಂಗ ದೃಢೀಕರಣ ಹಾಗೂ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು.

VI. **ವಿದೇಶ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ (Fresh Students):** ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳು ವಿದೇಶದಲ್ಲಿನ QS / THE World University Ranking 500 ರೊಳಗೆ ಬರುವ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟೋರಲ್, ಪಿಹೆಚ್‌ಡಿ, ಮಾಸ್ಟರ್ ಡಿಗ್ರೀ ಕೋರ್ಸುಗಳಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಅಭ್ಯರ್ಥಿಗಳಿಗೆ ವಾರ್ಷಿಕ ಗರಿಷ್ಠ ರೂ.10.00 ಲಕ್ಷದಿಂದ ಕೋರ್ಸಿನ ಅವಧಿಗೆ ಗರಿಷ್ಠ ರೂ.20.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ಮಂಜೂರು ಮಾಡಲಾಗುವುದು.

VI. **ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ:** ಒಕ್ಕಲಿಗ ಸಮುದಾಯದ ನಿರುದ್ಯೋಗಿ ಅರ್ಹ ಯುವಜನರನ್ನು ಗುರುತಿಸಿ ಕೌಶಾಲ್ಯಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಧೀನ ತರಬೇತಿ ಸಂಸ್ಥೆಗಳಾದ (ITI's, GTTC's | KGTTL's) ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ (VTU) ಇದರ ಕೇಂದ್ರಗಳಾದ ಬೆಂಗಳೂರು, ಮುದ್ದೇನಹಳ್ಳಿ, ದಾಂಡೇಲಿ, ಇಳಕಲ್, ದಾವಣಗೆರೆ, ಕಲಬುರಗಿ ಮತ್ತು ಮೈಸೂರಿನಲ್ಲಿ ಇರುವ ಕೌಶಲ್ಯ ಅಭಿವೃದ್ಧಿ ಕೇಂದ್ರಗಳ ಮೂಲಕ ಅಲ್ಪಾವಧಿ ಮತ್ತು ಉತ್ಕೃಷ್ಟ ಕೌಶಲ್ಯ ತರಬೇತಿಯನ್ನು ಆಯೋಜಿಸುವ ಯೋಜನೆಯಾಗಿದ್ದು, ಉದ್ಯೋಗಿಮುಖಿಗಳನ್ನಾಗಿಸಲು ತರಬೇತಿ ಕೊಡಿಸಲಾಗುವುದು

ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಮಾನ್ಯ ಶಾಸಕರು / ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್‌ರವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಗಳ ಮೂಲಕ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

ಸರ್ಕಾರದ ವಿವೇಚನಾ ಕೋಟಾ / ನಿಗಮದ ಅಧ್ಯಕ್ಷರು / ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಲ್ಲಿ ಸೌಲಭ್ಯ ಪಡೆಯಬಯಸುವವರೂ ಸಹ ಆನ್ಲೈನ್ ನಲ್ಲಿಯೇ ಅರ್ಜಿಯನ್ನು ಸಲ್ಲಿಸಬೇಕು.

ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸುವುದು.

**2023-24ನೇ ಸಾಲಿನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಆಯ್ಕೆ ಸಮಿತಿಗಳಲ್ಲಿ ಕಾರಣಾಂತರಗಳಿಂದ ಆಯ್ಕೆಯಾಗದೇ ಇರುವ ಅರ್ಹ ಅರ್ಜಿದಾರರು 2024-25ನೇ ಸಾಲಿನ ಪ್ರಕಟಣೆಗೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕವಿರುವುದಿಲ್ಲ. ಕಳೆದ ಸಾಲಿನ ಅರ್ಜಿಯನ್ನ ಆಯ್ಕೆಸಮಿತಿಗಳ ಮುಂದೆ ಆಯ್ಕೆಗೆ ಮತ್ತೊಮ್ಮೆ ಮಂಡಿಸಲಾಗುವುದು.**

**ಈ ಮೇಲ್ಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಬಯಸುವ ಒಕ್ಕಲಿಗ ಸಮುದಾಯದ ಅರ್ಜಿದಾರರು ಸೇವಾಸಿಂಧು ಪೋರ್ಟಲ್ ನ ಗ್ರಾಮಒನ್ / ಬೆಂಗಳೂರು ಒನ್ / ಕರ್ನಾಟಕ ಒನ್ ಗಳ ಮೂಲಕ ಆನ್‌ಲೈನಲ್ಲಿ ಮತ್ತು ಕ್ರಮಸಂಖ್ಯೆ 06 ರಲ್ಲಿನ ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕರ್ನಾಟಕ ತಂತ್ರಾಶದ** https://www.kaushalkar.com **ನಲ್ಲಿ ಅರ್ಜಿಯನ್ನು ದಿನಾಂಕ: 30.08.2024 ರೊಳಗೆ ಸಲ್ಲಿಸುವುದು.**

ಯೋಜನೆಯ ಅರ್ಹತೆ, ಮತ್ತು ಸಲ್ಲಿಸುವ ದಾಖಲಾತಿಗಳ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಾಲತಾಣ **https://kvcdc.karnataka.gov.in** ಅಥವಾ ನಿಗಮದ ದೂರವಾಣಿ ಸಂಖ್ಯೆ **080-29904350, 29904268** ಅನ್ನು ಸಂಪರ್ಕಿಸುವುದು **ಅಥವಾ** ಆಯಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದವರ ಕಚೇರಿಯವರನ್ನು ಸಂಪರ್ಕಿಸುವುದು.

**ವ್ಯವಸ್ಥಾಪಕ ನಿರ್ದೇಶಕರು**

ಪ್ರತಿಯನ್ನು:

1. ಸನ್ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಹಾಗೂ ನಿಗಮದ ಮಾನ್ಯ ಅಧ್ಯಕ್ಷರ ಅವಗಾಹನೆಗೆ ತರಲು ಸನ್ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಮಾಹಿತಿಗಾಗಿ.
3. ಮಾನ್ಯ ನಿರ್ದೇಶಕರು EDCS, ಸೇವಾಸಿಂಧು ಇವರಿಗೆ ಮಾಹಿತಿಗೆ ಮತ್ತು ಸೇವಾ ಸಿಂಧು ಪೋರ್ಟಲ್ ನಲ್ಲಿ ಆನ್ ಲೈನಲ್ಲಿ ಅರ್ಜಿ ಸಲ್ಲಿಸಲು Go Live ಮಾಡುವ ಬಗ್ಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
4. ರಾಜ್ಯ ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ರವರಿಗೆ ಮಾಹಿತಿಗೆ ಹಾಗೂ ಈ ಪ್ರಕಟಣೆಯನ್ನು ಜಿಲ್ಲಾ ಮಟ್ಟದಲ್ಲಿ ಸುದ್ದಿರೂಪದಲ್ಲಿ ಉಚಿತವಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ಪ್ರಕಟಿಸಿ ಪ್ರಚಾರಪಡಿಸುವಂತೆ ತಿಳಿಸಿದೆ.